**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ , ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:ಸಿ1(5)ಸ್ಥಾಪಬಡ್ತಿ/6/2022-23 ದಿನಾಂಕ:14-07-2022

**ಅಧಿಸೂಚನೆ**

**ವಿಷಯ**:-ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರೌಢಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಗ್ರೂಪ್-ಬಿ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

**ಉಲ್ಲೇಖ**:- 1. ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ.13.04.2022

2. ನಿರ್ದೇಶಕರು(ಪ್ರೌಢಶಿಕ್ಷಣ) ರವರು ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿ ಹಿಂಪಡೆದ ಅಧಿಸೂಚನೆ ದಿನಾಂಕ.15.06.2022

3. ನಿರ್ದೇಶಕರು(ಪ್ರೌಢಶಿಕ್ಷಣ) ರವರು ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸಿರುವ ದಿನಾಂಕ.11.07.2022 ಮತ್ತು 12.07.2022

***********

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಹಾಗೂ ಮೈಸೂರು ವಿಭಾಗದಲ್ಲಿನ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಗ್ರೂಪ್-ಬಿ ಖಾಲಿ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಲು ಉದ್ದೇಶಿಸಲಾಗಿದೆ. ಉಲ್ಲೇಖ(1) ರಂತೆ ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೇಡ್-2 ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಉಲ್ಲೇಖ(2) ರಂತೆ ದಿನಾಂಕ.07.04.2022 ರಂದು ಪ್ರಕಟಿಸಿದ್ದ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ಹಿಂಪಡೆದು ಉಲ್ಲೇಖ(3) ರಲ್ಲಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿರುತ್ತಾರೆ.

ಉಲ್ಲೇಖ(1)ರಲ್ಲಿ ಈ ಕಛೇರಿಯಿಂದ ಪ್ರಕಟಿಸಲಾಗಿದ್ದ ಬಡ್ತಿ ನೀಡಬಹುದಾದ ಆದ್ಯತಾ ಪಟ್ಟಿಯನ್ನು ಹಿಂಪಡೆದು, ಪ್ರಸ್ತುತ ನಿರ್ದೇಶಕರು(ಪ್ರೌಢಶಿಕ್ಷಣ) ಇವರು ಉಲ್ಲೇಖ(3)ರಲ್ಲಿ ಪ್ರಕಟಿಸಿದಂತೆ ಅಂತಿಮ ಜೇಷ್ಠತಾ ಪಟ್ಟಿಯನ್ನು ಆಧರಿಸಿ ಬೆಂಗಳೂರು/ಮೈಸೂರು ವಿಭಾಗದಲ್ಲಿ ಖಾಲಿ ಇರುವ ಮುಖ್ಯ ಶಿಕ್ಷಕರ/ತತ್ಸಮಾನ ವೃಂದದ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ಈ ಪತ್ರದೊಂದಿಗೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳಿಗೆ ಬಡ್ತಿ ನೀಡಬಹುದಾದ ಆದ್ಯತಾ ಪಟ್ಟಿಯನ್ನು ಇಲಾಖಾ ವೆಬ್ ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ.

**ಪಟ್ಟಿಯಲ್ಲಿರುವ ಶಿಕ್ಷಕರ ಅಗತ್ಯ ಮಾಹಿತಿಗಳನ್ನು ಚೆಕ್‌ಲಿಸ್ಟ್‌ನಲ್ಲಿ ಸಲ್ಲಿಸಲು ತಿಳಿಸಿದೆ.**

1. ಹೆಚ್.ಆರ್.ಎಂ.ಎಸ್. ನಲ್ಲಿ ವೇತನ ಸೆಳೆಯುವ ಕೆ.ಜಿ.ಐ.ಡಿ. ಸಂಖ್ಯೆಯನ್ನೇ ಕಡ್ಡಾಯವಾಗಿ ಕಾಲಂ-2ರಲ್ಲಿ ನಮೂದಿಸಬೇಕು.(ಒಂದು ವೇಳೆ ಹೆಚ್.ಆರ್.ಎಂ.ಎಸ್.ನಲ್ಲಿ ವೇತನ ಸೆಳೆಯುವ ಕೆ.ಜಿ.ಐ.ಡಿ.ಸಂಖ್ಯೆ ಹಾಗೂ ಶಿಕ್ಷಕರ ಸೇವಾ ತಂತ್ರಾಂಶದಲ್ಲಿ(ಇ.ಇ.ಡಿ.ಎಸ್) ನಮೂದಿಸಿರುವ ಕೆ.ಜಿ.ಐ.ಡಿ.ಸಂಖ್ಯೆ ವ್ಯತ್ಯಾಸವಾಗಿದ್ದಲ್ಲಿ ಅಂತಹ ಪ್ರಕರಣಗಳಿಗೆ ಸಂಬಂಧಪಟ್ಟ ಉಪನಿರ್ದೇಶಕರೆ ನೇರ ಹೊಣೆಗಾರರಾಗಿರುತ್ತಾರೆ)
2. ಈ ಪಟ್ಟಿಯಲ್ಲಿನ ಶಿಕ್ಷಕರ ಮಾಹಿತಿಯು ಶಿಕ್ಷಕರ ಸೇವಾ ತಂತ್ರಾಂಶದಲ್ಲಿ(ಇ.ಇ.ಡಿಎಸ್) ಕಡ್ಡಾಯವಾಗಿ ನಮೂದಾಗಿರುವ ಬಗ್ಗೆ ಮಾಹಿತಿ ಸಲ್ಲಿಸುವುದು.
3. ಬಡ್ತಿ ಸಂಬಂಧ ಪ್ರಕಟಿಸಲಾಗಿರುವ ತಾತ್ಕಾಲಿಕ ಪಟ್ಟಿಯಲ್ಲಿನ ಎಲ್ಲಾ ಪ್ರೌಢಶಾಲಾ ಸಹ ಶಿಕ್ಷಕರುಗಳ ಬಗ್ಗೆ ಶಿಸ್ತುಕ್ರಮ/ಇಲಾಖಾ ವಿಚಾರಣೆ/ನ್ಯಾಯಾಲಯದಲ್ಲಿ ಬಾಕಿ ಇರುವ ಬಗ್ಗೆ ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ದೃಢೀಕರಣವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಮೇಲ್ಕಂಡ ವಿವರಗಳನ್ನು ಲಗತ್ತಿಸಿರುವ ಚೆಕ್‌ಲಿಸ್ಟ್‌ನಲ್ಲಿ ಮಾಹಿತಿಯನ್ನು ನಮೂದಿಸಿದ ಪ್ರಸ್ತಾವನೆಯನ್ನು ಸಂಬಂಧಿಸಿದ ಶಿಕ್ಷಕರುಗಳಿಂದ ಪಡೆದು ಜಿಲ್ಲಾವಾರು ಕ್ರೋಢೀಕರಿಸಿ, ಪ್ರತಿ ಶಿಕ್ಷಕರ ಬಡ್ತಿ ಪ್ರಸ್ತಾವನೆಯನ್ನು ಪ್ರತ್ಯೇಕ ಡೋಸಿಯರ್‌ಗಳಲ್ಲಿ ಸಿದ್ದಪಡಿಸಿ ದಿನಾಂಕ.25.07.2022 ರೊಳಗೆ ಕಡ್ಡಾಯವಾಗಿ ಮುದ್ದಾಂ ಈ ಕಛೇರಿಗೆ ಸಲ್ಲಿಸುವುದು.

**ಡಾ.ರೂಪಶ್ರೀ.ಎಸ್, ಕೆ.ಎ.ಎಸ್**
**ಜಂಟಿ ನಿರ್ದೇಶಕರು(ಆಡಳಿತ)**

**ಗೆ,**

1.ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು(ಆಡಳಿತ) (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಮುಂದಿನ ಅಗತ್ಯ ಕ್ರಮಕ್ಕಾಗಿ.

## ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಗ್ರೂಪ್–ಬಿ ಹುದ್ದೆಗೆ ಬಡ್ತಿ ನೀಡುವ ಸಂಬಂಧ ಚೆಕ್ ಲಿಸ್ಟ್

| ಕ್ರಮ ಸಂಖ್ಯೆ | ಸೇವಾ ವಿವರದ ಚೆಕ್ ಲಿಸ್ಟ್ | ವಿವರಣೆ |
|---|---|---|
| 1 | ಶಿಕ್ಷಕರ ಪ್ರಥಮ ಕೆ.ಜಿ.ಐ.ಡಿ ಪಾಲಸಿ ಸಂಖ್ಯೆ | |
| 2 | ಜೇಷ್ಠತಾ ಕ್ರಮ ಸಂಖ್ಯೆ | |
| 3 | ಶಿಕ್ಷಕ/ಶಿಕ್ಷಕಿಯ ಹೆಸರ | |
| 4 | ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಾಲೆಯ ಹೆಸರು ಮತ್ತು ವಿಳಾಸ | |
| 5 | ಸೇವೆಗೆ ಸೇರಿ ದಿನಾಂಕ | |
| 6 | 2017–18 ರಿಂದ 2021–22ರ ಕಾರ್ಯ ನಿರ್ವಹಣಾ ವರದಿ [ಅಂಗೀಕಾರ ಷರದೊಂದಿಗೆ ಸಲ್ಲಿಸುವುದು] | |
| 7 | ಶಿಸ್ತಿನ ಕ್ರಮ/ಇಲಾಖಾ ವಿಚಾರಣೆ ಬಾಕಿ ಇರುವ ಬಗ್ಗೆ (ಪೂರಕ ದಾಖಲೆಗಳೊಂದಿಗೆ) | |
| 8 | ಕನ್ನಡ ಭಾಷಾ ಪರೀಕ್ಷೆ ತೇರ್ಗಡೆ ಪಡೆದ ದಾಖಲೆಗಳ ಪ್ರತಿ ಹಾಗೂ ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್, ಜನರಲ್ ಲಾ ಪಾರ್ಟ್–1 ಉತ್ತೀರ್ಣರಾದ ಪ್ರಮಾಣ ಪತ್ರ ಗಳು, ಪರಿವೀಕ್ಷಣಾ ಅವಧಿ ಇತ್ಯರ್ಥದ ಘೋಷಣಾ ಪತ್ರ ಹಾಗೂ ಇಇಡಿಎಸ್ ಪ್ರತಿ | |
| 9 | ಹಿಂದಿ ಶಿಕ್ಷಕರಾದಲ್ಲಿ ಹಿಂದಿ ಬಿ.ಎ ಅಥವಾ ತತ್ಸಮಾನ ಪದವಿ ಹಾಗೂ ಬಿ.ಇಡಿ ಉತ್ತೀರ್ಣರಾದ ಬಗ್ಗೆ ಪ್ರಮಾಣ ಪತ್ರಗಳು(ದೃಢೀಕರಣದೊಂದಿಗೆ) | |
| 10 | ಬಡ್ತಿ ನೀಡುವ ಬಗ್ಗೆ ಉಪ ನಿರ್ದೇಶಕರು(ಆಡಳಿತ)ರವರ ಸ್ಪಷ್ಟ ಅಭಿಪ್ರಾಯ | |

(ಸಹಿ)
ಉಪನಿರ್ದೇಶಕರು [ಆಡಳಿತ]